ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ಕೊಳ್ಳೇಗಾಲ-ಮಹದೇಶ್ವರ ಬೆಟ್ಟ ರಸ್ತೆ ಗುಂಡಿ ಬಿದ್ದು ಹದಗೆಟ್ಟಿರುವ ಬಗ್ಗೆ

ಶ್ರೀಎಸ್.ನಾಗರಾಜ್(ಸಂದೇಶ್‌ನಾಗರಾಜ್)(ಸ್ಥಳೀಯಸಂಸ್ಥೆಗಳಕ್ಷೇತ್ರ):-

1205 (1414) ಮಾನ್ಯ ಉಪ ಮುಖ್ಯಮಂತ್ರಿಯವರು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಳ್ಳೇಗಾಲ-ಮಹದೇಶ್ವರ ಬೆಟ್ಟ ನಡುವೆ ಇರುವ 80 ಕಿ.ಮೀ ರಸ್ತೆಯು ಕೊಳ್ಳೇಗಾಲ ಉಪವಿಭಾಗ ಮತ್ತು ಮಹದೇಶ್ವರ ಬೆಟ್ಟ ಉಪವಿಭಾಗಕ್ಕೆ ಸೇರುತ್ತಿದ್ದು, ಗುಂಡಿಬಿದ್ದು, ಹದಗೆಟ್ಟು, ವಾಹನಗಳ ಸಂಚಾರಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಪ್ರಮುಖ ರಸ್ತೆಯಲ್ಲಿ ವರ್ಷವಿಡೀ ವಾಹನ ಸಂಚಾರವಿದ್ದು, ರಸ್ತೆಯಲ್ಲಿ ಹೊಂಡಗಳು ಬಿದ್ದಿರುವುದರಿಂದ ವಾಹನ ಸಂಚಾರಕ್ಕೆ ಅನಾನೂಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸಧ್ಯದಲ್ಲಿಯೇ ಯುಗಾದಿ, ದಸರಾ, ದೀಪಾವಳಿ, ಅಮಾವಾಸ್ಯೆಗಳಲ್ಲಿ ಕಾಲ್ನಡಿಗೆ ಮತ್ತು ವಾಹನಗಳ ಮೂಲಕ ಲಕ್ಷಾಂತರ ಜನರು ಬೆಟ್ಟಕ್ಕೆ ಬರುತ್ತಿದ್ದು, ಸಾವಿರಾರು ವಾಹನಗಳು ಸಂಚರಿಸುವುದರಿಂದ ಈ ರಸ್ತೆಯನ್ನು ಕೂಡಲೇ ದುರಸ್ತಿ ಮಾಡಲು ಕ್ರಮ ಜರುಗಿಸಲಾಗುವುದೇ?